# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Add.Dir/JD North/LP/0384/2015-16 ದಿನಾಂಕ: 30-05-2019.

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಖಾತಾ ಸಂಖ್ಯೆ. 9, ಸರ್ವೆ ನಂ. 5/1ಸಿ, ಸರ್ವೆ ನಂ. 7, ವಾರ್ಡ್ ನಂ. 12, ಚಿಕ್ಕಸಂದ್ರ, ಹೆಸರಘಟ್ಟ ಮುಖ್ಯ ರಸ್ತೆ, ದಾಸರಹಳ್ಳಿ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 2 ರಲ್ಲಿನ ಬ್ಲಾಕ್ – ಇ, ಎಫ್ ರ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ಪ್ರಾರಂಭಿಕ ಪ್ರಮಾಣಪತ್ರ ಕೋರಲಾದ ತಮ್ಮ ಮನವಿ ಪತ್ರ ದಿನಾಂಕ: 07-01-2019 & 24-04-2019.

2) ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ) ನೀಡಲಾದ ದಿನಾಂಕ: 27-09-2018.

3) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD North/LP/0384/2015-16, ದಿನಾಂಕ: 19-12-2017.

* * * * * * *

ಆಸ್ತಿ ಖಾತಾ ಸಂಖ್ಯೆ. 9, ಸರ್ವೆ ನಂ. 5/1ಸಿ, ಸರ್ವೆ ನಂ. 7, ವಾರ್ಡ್ ನಂ. 12, ಚಿಕ್ಕಸಂದ್ರ, ಹೆಸರಘಟ್ಟ ಮುಖ್ಯ ರಸ್ತೆ, ದಾಸರಹಳ್ಳಿ ವಲಯ, ಬೆಂಗಳೂರು ಇಲ್ಲಿರುವ ಸ್ವತ್ತಿನಲ್ಲಿ ತಳ + ನೆಲ + ಮೇಲಿನ 9 ಅಂತಸ್ತಿನ ಬಿಲ್ಡಿಂಗ್ – 1 ರ ಬ್ಲಾಕ್ – ಎ, ಬಿ, ಸಿ, ಡಿ ಮತ್ತು ಬಿಲ್ಡಿಂಗ್ – 2, ಬ್ಲಾಕ್ – ಇ, ಎಫ್ ಮತ್ತು ಕ್ಲಬ್‌ಹೌಸ್ ಒಳಗೊಂಡಂತೆ ಒಟ್ಟಾರೆ 356 ಘಟಕಗಳುಳ್ಳ ವಸತಿ ಸಮುಚ್ಚಯ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಉಲ್ಲೇಖ (3) ರಂತೆ ಈ ಕಛೇರಿಯಿಂದ ದಿನಾಂಕ: 19-12-2017 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಮಂಜೂರಾದ ಕಟ್ಟಡಗಳ ಪೈಕಿ ಬಿಲ್ಡಿಂಗ್ – 1 ರಲ್ಲಿರುವ ವಸತಿ ಸಮುಚ್ಚಯಕ್ಕೆ ಉಲ್ಲೇಖ (2) ರಲ್ಲಿ ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ) ನೀಡಲಾಗಿರುತ್ತದೆ. ಇನ್ನುಳಿದ ಬಿಲ್ಡಿಂಗ್ – 2 ರಲ್ಲಿನ ಬ್ಲಾಕ್ – ಇ ಮತ್ತು ಎಫ್ ರಲ್ಲಿನ ತಳ + ನೆಲ + ಮೇಲಿನ 9 ಅಂತಸ್ತುಗಳ 95 ಘಟಕಗಳುಳ್ಳ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (1) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಬಿಲ್ಡಿಂಗ್ – 2 ರಲ್ಲಿನ ಬ್ಲಾಕ್ – ಇ, ಎಫ್ ರ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಉಪಯೋಗದ ಕಟ್ಟಡ ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಸದರಿ ಬಿಲ್ಡಿಂಗ್ – 2 ರಲ್ಲಿನ ಬ್ಲಾಕ್ – ಇ, ಎಫ್ ರ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಕಟ್ಟಡಗಳಿಗೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 22-05-2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಗಳಿಗೆ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ ರೂ. 89,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿದ್ದು, ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000092 ದಿನಾಂಕ: 30-05-2019 ರಲ್ಲಿ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಸಂದಾಯ ಮಾಡಿಕೊಳ್ಳಲಾಗಿದೆ. ಆದುದರಿಂದ ಉಲ್ಲೇಖ (2) ರಲ್ಲಿ ಬಿಲ್ಡಿಂಗ್ – 1 ಕ್ಕೆ ನೀಡಲಾದ ಪ್ರಾರಂಭಿಕ ಪ್ರಮಾಣಪತ್ರ ಮುಂದುವರೆದಂತೆ ಬಿಲ್ಡಿಂಗ್ – 2 ರಲ್ಲಿನ ಬ್ಲಾಕ್ – ಇ, ಎಫ್ ರ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ಮಂಜೂರಾತಿಯ ಸಿಂಧುತ್ವವು ಉಲ್ಲೇಖ (3) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
5. ವಿವಿಧ ಇಲಾಖೆಗಳಿಂದ ನೀಡಿರುವ ನಿರಾಕ್ಷೇಪಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತನ್ನು ಪಾಲಿಸತಕ್ಕದ್ದು.

ಸಹಿ /-

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,

M/s Kreate Shelters Rep by its GPA Holder
M/s. Concorde Housing Corporation Pvt.Ltd.,
# 46/A, 1st Main Road, Sarakki Industrial Layout,
J P Nagara, 3rd Phase,
Bengaluru - 560078.

**ಪ್ರತಿಯನ್ನು:**

1. ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ಶೆಟ್ಟಿಹಳ್ಳಿ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ.

B.R. Muddo Bi 30/5/19

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

o/c

30/5/19 30/5/19 30/5/19